**Akashvani : Bangalore**
**National Bulletin In Kannada**
**21.04.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.04.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ರಾಷ್ಟ್ರದ ಸೇವೆಯನ್ನು ತಮ್ಮ ಸರ್ವೋತ್ತಮ ಕರ್ತವ್ಯವೆಂದು ಭಾವಿಸಿ ಕಾರ್ಯ ನಿರ್ವಹಿಸಲು ಪ್ರಧಾನಿ ನರೇಂದ್ರ ಮೋದಿ ಕರೆ

೨. ನಾಲ್ಕು ದಿನಗಳ ಅಧಿಕೃತ ಭಾರತ ಭೇಟಿಗಾಗಿ ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ನವದೆಹಲಿಗೆ ಆಗಮನ ; ಇಂದು ಸಂಜೆ ಪ್ರಧಾನಿಯೊಂದಿಗೆ ಮಹತ್ವದ ಸಭೆ

೩. ಇಸ್ರೋದ ಸ್ಪೇಡೆಕ್ಸ್ ಯೋಜನೆಯ ೨ನೇ ಡಾಕಿಂಗ್ ಪ್ರಯೋಗ ಯಶಸ್ವಿ

೪. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಕೋಲ್ಕತ್ತಾ ನೈಟ್ ರೈಡರ್ಸ್-ಗುಜರಾತ್ ಟೈಟಾನ್ಸ್ ಮುಖಾಮುಖಿ

**<><*<><>*><>**

ರಾಷ್ಟ್ರದ ಸೇವೆಯನ್ನು ತಮ್ಮ ಸರ್ವೋತ್ತಮ ಕರ್ತವ್ಯವೆಂದು ಭಾವಿಸಿ ಕಾರ್ಯ ನಿರ್ವಹಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಎಲ್ಲ ಸರ್ಕಾರಿ ನೌಕರರಿಗೆ ಕರೆ ನೀಡಿದ್ದಾರೆ. ೧೭ನೇ ನಾಗರಿಕ ಸೇವೆಗಳ ದಿನದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ಸಾರ್ವಜನಿಕ ಆಡಳಿತದಲ್ಲಿ ಉತ್ಕೃಷ್ಟತೆಗಾಗಿ ಪ್ರಧಾನ ಮಂತ್ರಿಗಳ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಬಳಿಕ ಸರ್ಕಾರಿ ನೌಕರರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಎಲ್ಲ ಸರ್ಕಾರಿ ನೌಕರರು ಪ್ರಜಾಪ್ರಭುತ್ವದ ಹಾದಿಯಲ್ಲಿ ಆಡಳಿತವನ್ನು ನಡೆಸಿ, ನಿಷ್ಠಾವಂತರಾಗಿ ಸಮರ್ಪಣಾ ಭಾವದೊಂದಿಗೆ ಕಾರ್ಯನಿರ್ವಹಿಸಬೇಕು. ದೇಶದ ಮಹತ್ವಾಕಾಂಕ್ಷಿ ಗುರಿಗಳ ಸಾಧನೆಗೆ ಹಗಲು-ರಾತ್ರಿ ಶ್ರಮವಹಿಸಬೇಕು ಎಂದು ಸರ್ದಾರ್ ವಲ್ಲಭಬಾಯಿ ಪಟೇಲ್ ಹೇಳಿದ್ದರು. ಅವರ ಈ ಮಾತುಗಳು ಇಂದು ನಾವೆಲ್ಲರೂ ವಿಕಸಿತ ಭಾರತದ ಗುರಿಯ ಸಂಕಲ್ಪದೊಂದಿಗೆ ಮುನ್ನಡೆಯುತ್ತಿರುವ ಸಂದರ್ಭದಲ್ಲಿ ಪ್ರಸ್ತುತವಾಗಿವೆ ಎಂದರು. ಇದೇ ವೇಳೆ ಅವರು ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯಿ ಅವರಿಗೆ ಗೌರವ ನಮನ ಸಲ್ಲಿಸಿದರು. ದೇಶದ ಯುವಕರು, ರೈತರು ಮತ್ತು ಮಹಿಳೆಯರು ದೊಡ್ಡ ಕನಸುಗಳನ್ನು ಕಾಣುತ್ತಿದ್ದು, ಅವರ ಆಕಾಂಕ್ಷೆಗಳನ್ನು ಈಡೇರಿಸಲು ಸರ್ಕಾರ

ವೇಗವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ. ಇಂದು ರೂಪಿಸಲಾಗುತ್ತಿರುವ ನೀತಿ, ನಿರ್ಧಾರಗಳು ಮುಂದಿನ ಸಾವಿರ ವರ್ಷಗಳ ಭವಿಷ್ಯವನ್ನು ರೂಪಿಸಲಿದೆ ಎಂದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೪೦ ಸೆಕೆಂಡ್‌ಗಳು)

ಈ ವರ್ಷ, ಜಿಲ್ಲೆಗಳ ಸಮಗ್ರ ಅಭಿವೃದ್ಧಿ, ಮಹತ್ವಾಕಾಂಕ್ಷೆಯ ಬ್ಲಾಕ್‌ಗಳ ಕಾರ್ಯಕ್ರಮ ಮತ್ತು ನಾವೀನ್ಯತೆ ವಿಭಾಗಗಳಲ್ಲಿ ಒಟ್ಟು ೧೪ ಪ್ರಶಸ್ತಿಗಳನ್ನು ಪ್ರಧಾನಿ ಸರ್ಕಾರಿ ನೌಕರರಿಗೆ ಪ್ರದಾನ ಮಾಡಿದರು. ಸರ್ಕಾರಿ ನೌಕರರು ನಾಗರಿಕರ ಹಿತದೃಷ್ಟಿಯಿಂದ ತಮ್ಮನ್ನು ತಾವು ಅರ್ಪಿಸಿಕೊಳ್ಳಲು, ಸಾರ್ವಜನಿಕ ಸೇವೆಗೆ ಬದ್ಧರಾಗಿರಲು ಮತ್ತು ತಮ್ಮ ಕೆಲಸದಲ್ಲಿ ಶ್ರೇಷ್ಠತೆಯತ್ತ ಶ್ರಮಿಸಲು ನಾಗರಿಕ ಸೇವೆಗಳ ದಿನ ಒಂದು ಸಂದರ್ಭವಾಗಿದೆ. ೧೯೪೭ ರಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಆಡಳಿತ ಸೇವಾ ಅಧಿಕಾರಿಗಳ ಪ್ರಶಿಕ್ಷಣಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ದಿನದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ.

<><*<><>*><>

ಎಲ್ಲ ಸರ್ಕಾರಿ ನೌಕರರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ನಾಗರಿಕ ಸೇವೆಗಳ ದಿನದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ರಾಷ್ಟ್ರಪತಿ, ನೀತಿ ನಿರೂಪಣೆ ಹಾಗೂ ಅನಷ್ಠಾನ ಸೇರಿದಂತೆ ಸಾರ್ವಜನಿಕ ಸೇವೆಯಲ್ಲಿ ಸರ್ಕಾರಿ ನೌಕರರು ವಹಿಸುವ ಪಾತ್ರ ನಾಗರಿಕರ ಯೋಗಕ್ಷೇಮ ಮತ್ತು ಒಟ್ಟಾರೆ ದೇಶದ ಅಭಿವೃದ್ಧಿಗೆ ಪೂರಕವಾಗಿದೆ. ದೇಶ ತನ್ನ ಮಹತ್ವಾಕಾಂಕ್ಷಿ ಗುರಿಗಳನ್ನು ಸಾಧಿಸಲು ಮತ್ತು ಪರಿಣಾಮಕಾರಿ ಆಡಳಿತದಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸಲು ಸಹಾಯ ಮಾಡುವಲ್ಲಿ ಸರ್ಕಾರಿ ನೌಕರರು ಪ್ರಮುಖ ಪಾತ್ರ ವಹಿಸುತ್ತಾರೆ ಎಂದಿದ್ದಾರೆ.

<><*<><>*><>

ನಾಲ್ಕು ದಿನಗಳ ಅಧಿಕೃತ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿರುವ ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಅವರಿಗೆ ಇಂದು ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಇಂದು ಬೆಳಿಗ್ಗೆ ನವದೆಹಲಿ ವಿಮಾನನಿಲ್ದಾಣಕ್ಕೆ ಆಗಮಿಸಿದ ಅವರನ್ನು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಬರಮಾಡಿಕೊಂಡರು. ಜೆ.ಡಿ.ವ್ಯಾನ್ಸ್ ಅವರೊಂದಿಗೆ ಅವರ ಪತ್ನಿ ಉಷಾ ವ್ಯಾನ್ಸ್ ಕೂಡ ಆಗಮಿಸಿದರು. ಬಳಿಕ ಅವರು, ರಾಷ್ಟ್ರ ರಾಜಧಾನಿಯಲ್ಲಿರುವ ಅಕ್ಷರ್‌ಧಾಮ್ ಮಂದಿರಕ್ಕೆ ಭೇಟಿ ನೀಡಿದರು. ಇಂದು ಸಂಜೆ ಅವರು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ದ್ವಿಪಕ್ಷೀಯ ಸಂಬಂಧಗಳ ಪ್ರಗತಿ ಮತ್ತು ಕಳೆದ ಫೆಬ್ರವರಿ ೧೩

ರಂದು ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಭೇಟಿಯ ಸಂದರ್ಭದಲ್ಲಿ ಹೊರಡಿಸಲಾದ ಭಾರತ-ಅಮೆರಿಕ ಜಂಟಿ ಹೇಳಿಕೆಯ ಫಲಿತಾಂಶಗಳ ಅನುಷ್ಠಾನದ ಕುರಿತಂತೆ ಚರ್ಚೆ ನಡೆಯಲಿದೆ. ಇದೇ ವೇಳೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಉಭಯ ನಾಯಕರು ಚರ್ಚಿಸಲಿದ್ದಾರೆ. ಬಳಿಕ ಅಮೆರಿಕ ಉಪಾಧ್ಯಕ್ಷ ಜೈಪುರ್ ಹಾಗೂ ಆಗ್ರಾ ಪ್ರವಾಸ ಕೈಗೊಳ್ಳಲಿದ್ದಾರೆ. ಜೆ.ಡಿ.ವ್ಯಾನ್ಸ್ ಭಾರತಕ್ಕೆ ನೀಡಿರುವ ಮೊದಲ ಭೇಟಿ ಇದಾಗಿದೆ.

<><*<><>*><>

ಇಸ್ರೋದ ಬಾಹ್ಯಾಕಾಶ ಡಾಕಿಂಗ್ ಪ್ರಯೋಗ ಸ್ಪೇಡೆಕ್ಸ್ ಯೋಜನೆಯಡಿಯಲ್ಲಿ ಉಪಗ್ರಹಗಳ ೨ನೇ ಡಾಕಿಂಗ್ ಪ್ರಕ್ರಿಯೆಯನ್ನು ಇಸ್ರೋ ಯಶಸ್ವಿಯಾಗಿ ಸಾಧಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ಮುಂದಿನ ಹಂತದ ಪ್ರಯೋಗಗಳು ಮುಂದಿನ ೨ ವಾರಗಳಲ್ಲಿ ನಡೆಯಲಿದೆ ಎಂದು ತಿಳಿಸಿದ್ದಾರೆ. ಸ್ಪೇಡೆಕ್ಸ್ ಕಾರ್ಯಾಚರಣೆಗಳ ಕುರಿತು ಮಾಹಿತಿ ಹಂಚಿಕೊಂಡ ಅವರು, ಸ್ಪೇಡೆಕ್ಸ್ ಅಡಿ ಪಿಎಸ್‌ಎಲ್‌ವಿ ಸಿ-೬೦ ಮಿಷನ್ ಅನ್ನು ಕಳೆದ ವರ್ಷ ಡಿಸೆಂಬರ್ ೩೦ ರಂದು ಯಶಸ್ವಿಯಾಗಿ ಉಡಾವಣೆ ಮಾಡಲಾಯಿತು. ನಂತರ ಈ ವರ್ಷದ ಜನವರಿ ೧೬ರಂದು ಬೆಳಗ್ಗೆ ೮.೨೦ಕ್ಕೆ ಉಪಗ್ರಹಗಳನ್ನು ಮೊದಲ ಬಾರಿಗೆ ಯಶಸ್ವಿಯಾಗಿ ಡಾಕಿಂಗ್ ಮಾಡಿ ಕಳೆದ ತಿಂಗಳ ೧೩ರಂದು ಯಶಸ್ವಿಯಾಗಿ ಅನ್‌ಡಾಕ್ ಮಾಡಲಾಯಿತು ಎಂದಿದ್ದಾರೆ.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಮೇಘಸ್ಫೋಟ ಮತ್ತು ಭೂಕುಸಿತ ಪೀಡಿತ ರಾಂಬನ್ ಜಿಲ್ಲೆಯಲ್ಲಿ ಪರಿಹಾರ ಹಾಗೂ ರಕ್ಷಣಾ ಕಾರ್ಯಾಚರಣೆಗಳು ಇಂದು ಪುನರಾರಂಭಗೊಂಡಿವೆ. ಕಾಶ್ಮೀರ ಕಣಿವೆಯನ್ನು ದೇಶದ ಉಳಿದ ಭಾಗಗಳಿಗೆ ಸಂಪರ್ಕಿಸುವ ಪ್ರಮುಖ ರಸ್ತೆಯಾದ ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿ - ೪೪ ಅನ್ನು ಮತ್ತೆ ತೆರೆಯಲು ಅಧಿಕಾರಿಗಳು ಕ್ರಮ ವಹಿಸುತ್ತಿದ್ದಾರೆ. ಭಾರೀ ಗುಡುಗು ಸಹಿತ ಮಳೆ, ಆಲಿಕಲ್ಲು ಮತ್ತು ಹಠಾತ್ ಪ್ರವಾಹ ಸೇರಿದಂತೆ ತೀವ್ರ ಹವಾಮಾನ ಪರಿಸ್ಥಿತಿಗಳು ಈ ಪ್ರದೇಶದಾದ್ಯಂತ ವ್ಯಾಪಕ ಹಾನಿಯನ್ನುಂಟು ಮಾಡಿವೆ.  ರಾಂಬನ್ ಜಿಲ್ಲೆಯಲ್ಲಿ ನಿನ್ನೆ ಮೇಘಸ್ಫೋಟದಿಂದ ಉಂಟಾದ ಭೂಕುಸಿತದಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಮುಂದಿನ ೪೮ ಗಂಟೆಗಳಲ್ಲಿ ಭೂ ಹಾಗೂ ಮಣ್ಣು ಕುಸಿತದಿಂದ ಸ್ಥಗಿತಗೊಂಡಿರುವ ಎಲ್ಲ ರಸ್ತೆ ಮಾರ್ಗಗಳನ್ನು ಸಂಚಾರಕ್ಕೆ ಮುಕ್ತವಾಗಿಸಲು ಕ್ರಮ ವಹಿಸಲಾಗುತ್ತಿದೆ ಎಂದು ರಾಮ್‌ಬನ್ ಉಪಾಯುಕ್ತ ಬಷೀರ್ ಉಲ್ ಹಕ್ ಚೌಧರಿ ತಿಳಿಸಿದ್ದಾರೆ.

<><*<><>*><>

ಜಾರ್ಖಂಡ್‌ನ ಬೊಕಾರೊದ ಲುಗು ಹಿಲ್ ನಲ್ಲಿ ಪೊಲೀಸರು ಮತ್ತು ಅರೆ ಸೇನಾಪಡೆ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಸುಮಾರು ೮ ಮಂದಿ ನಕ್ಸಲರು ಮೃತಪಟ್ಟಿದ್ದಾರೆ. ಎನ್‌ಕೌಂಟರ್‌ನಲ್ಲಿ ಒಂದು ಕೋಟಿ ಬಹುಮಾನ ಹೊತ್ತಿದ್ದ ಮಾವೋವಾದಿ ವಿವೇಕ್ ಕೂಡ ಹತನಾಗಿದ್ದಾನೆ. ಇಲ್ಲಿಯವರೆಗೆ ಸುಮಾರು ೮ ಮಾವೋವಾದಿಗಳ ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ. ಒಂದು ಎಕೆ ಸರಣಿಯ ರೈಫಲ್, ಒಂದು ಎಸ್‌ಎಲ್‌ಆರ್, ೩ ಇನ್ಸಾಸ್ ರೈಫಲ್, ಒಂದು ಪಿಸ್ತೂಲ್ ಮತ್ತು ೮ ಭರ್ಮಾರ್ ರೈಫಲ್‌ಗಳು ಸೇರಿದಂತೆ ಹಲವು ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಾರ್ಖಂಡ್ ಪೊಲೀಸ್ ಮಹಾನಿರ್ದೇಶಕ ಅನುರಾಗ್ ಗುಪ್ತ ಮಾಹಿತಿ ನೀಡಿದ್ದಾರೆ. ತಲೆಮರಿಸಿಕೊಂಡಿರುವ ಇತರ ನಕ್ಸಲರನ್ನು ಪತ್ತೆ ಹಚ್ಚಲು ಕಾರ್ಯಾಚರಣೆ ಮುಂದುವರೆದಿದೆ.

<><*<><>*><>

ಇರಾನ್-ಅಮೆರಿಕ ಜೊತೆಗಿನ ಪರೋಕ್ಷ ಮಾತುಕತೆಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ರಾಜತಾಂತ್ರಿಕ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬವನ್ನು ಬಯಸುವುದಿಲ್ಲ ಎಂದು ಇರಾನ್‌ನ ಉಪ ವಿದೇಶಾಂಗ ಸಚಿವ ಖಾಜಂ ಘರೀಬ್ ಬಾದಿ ತಿಳಿಸಿದ್ದಾರೆ. ತೆಹರಾನ್‌ನಲ್ಲಿ ನಿನ್ನೆ ಸಂಸತ್ತಿನ ರಾಷ್ಟ್ರೀಯ ಭದ್ರತೆ ಮತ್ತು ವಿದೇಶಾಂಗ ನೀತಿ ಸಂಹಿತೆಯ ಸದಸ್ಯರೊಂದಿಗಿನ ಸಭೆಯಲ್ಲಿ ಮಾತನಾಡಿದ ಅವರು, ಇಟಲಿ ರಾಜಧಾನಿ ರೋಮ್‌ನಲ್ಲಿ ನಿನ್ನೆ ನಡೆದ ೨ನೇ ಸುತ್ತಿನ ಮಾತುಕತೆ ಸಂದರ್ಭದಲ್ಲಿ ಇರಾನ್ ಮತ್ತು ಅಮೆರಿಕ ಒಟ್ಟಾರೆ ಚೌಕಟ್ಟು ಕಾರ್ಯಸೂಚಿಯ ಬಗ್ಗೆ ಚರ್ಚಿಸಿ ಸಹಮತಕ್ಕೆ ಬಂದಿವೆ ಎಂದು ತಿಳಿಸಿದ್ದಾರೆ.

ಇರಾನ್ ಜನರಿಗೆ ಆರ್ಥಿಕವಾಗಿ ಪ್ರಯೋಜನಕಾರಿಯಾಗುವ ರೀತಿಯಲ್ಲಿ ಇರಾನ್ ಮೇಲಿನ ಎಲ್ಲ ನಿರ್ಬಂಧಗಳನ್ನು ತೆರವುಗೊಳಿಸಬೇಕು ಎಂದರು. ಏಪ್ರಿಲ್ ೧೨ ರಂದು ಮಸ್ಕಟ್‌ನಲ್ಲಿ ನಡೆದ ಇರಾನ್ ಹಾಗೂ ಅಮೆರಿಕ ನಡುವಿನ ಮಾತುಕತೆಗಳು ತೆಹರಾನ್‌ನ ಪರಮಾಣು ಕಾರ್ಯಕ್ರಮ ಮತ್ತು ನಿರ್ಬಂಧಗಳನ್ನು ತೆಗೆದು ಹಾಕುವ ಮೇಲೆ ಕೇಂದ್ರೀಕರಿಸಿತ್ತು.

<><*<><>*><>

ಕೋಲ್ಕೊತ್ತಾದ ಈಡನ್ ಗಾರ್ಡನ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ೯ ವಿಕೆಟ್‌ಗಳಿಂದ ಮಣಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ನ<>*><>